# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ.ಶ್ರೀನಿವಾಸ್ ಇವರುಗಳು ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ

**ಪ್ರಶ್ನೆ:**

ಸರ್ಕಾರಿ ಪ್ರಾಥಮಿಕ ಹಾಗು ಪ್ರೌಢಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಮಧ್ಯಾಹ್ನದ ಊಟ, ಮೊಟ್ಟೆ, ಹಾಲು ವಿತರಣೆ ಪಠ್ಯಪುಸ್ತಕ ಸಮವಸ್ತ್ರ ಇತ್ಯಾದಿಗಳನ್ನು ನೀಡಲಾಗುತ್ತಿದೆ. ಶಾಲೆಯಲ್ಲಿ ಶಿಕ್ಷಕರು ಪ್ರತಿನಿತ್ಯ ಪಾಠ ಮಾಡುವುದನ್ನು ಬಿಟ್ಟು ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟ ತಯಾರಿ ಮಾಡುವುದು, ಹಾಲು ತರುವುದು, ಮೊಟ್ಟೆಗಳನ್ನು ತರುವುದು ಈ ಕೆಲಸವನ್ನೇ ಮಾಡುತ್ತಿದ್ದಾರೆ. ಇತ್ತೀಚೆಗೆ ಅಜೀಂ ಪ್ರೇಮ್‌ಜಿ ಫೌಂಡೇಷನ್ ವತಿಯಿಂದ ಮಕ್ಕಳಿಗೆ ಮೊಟ್ಟೆಯನ್ನು ನೀಡುತ್ತಿದ್ದಾರೆ. ಮೊಟ್ಟೆಯನ್ನು ತಂದು ಮಕ್ಕಳಿಗೆ ನೀಡುವಲ್ಲಿ ಶಿಕ್ಷಕರಿಗೆ ತುಂಬಾ ತೊಂದರೆಯಾಗಿದೆ. ಖಾಸಗಿ ಏಜೆನ್ಸಿ ನೀಡುವ ಹಣದಲ್ಲಿ ಇಂತಿಷ್ಟು ತೂಕದ ಮೊಟ್ಟೆಯನ್ನೇ ನೀಡಬೇಕು ಇಂತವರಿಂದಲೇ ಖರೀದಿಸಬೇಕು, ಅವರು ನೀಡುವ ಹಣವು ಮೊಟ್ಟೆಯನ್ನು ಖರೀದಿಸಿ ನೀಡಲು ಶಿಕ್ಷಕರಿಗೆ ಸಾಧ್ಯವಾಗುತ್ತಿಲ್ಲ. ಶಿಕ್ಷಕರು ತಮ್ಮ ಕೈಯಿಂದ ಹಣವನ್ನು ಹಾಕುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮೊಟ್ಟೆ ವಿತರಣೆಯ ಲೆಕ್ಕವನ್ನು ಆನ್‌ಲೈನ್ ಮೂಲಕ ಪ್ರತಿನಿತ್ಯ ಅಪ್ ಲೋಡ್ ಮಾಡಬೇಕೆಂಬ ಷರತ್ತನ್ನು ವಿಧಿಸಲಾಗಿದೆ. ಶಿಕ್ಷಕರನ್ನು ಆನ್‌ಲೈನ್ ಸಮಸ್ಯೆಯಿಂದ ಪ್ರತನಿತ್ಯ ತುಂಬಾ ಸಮಸ್ಯೆಯನ್ನು ಅನುಭವಿಸುತ್ತಿದ್ದಾರೆ. ತಾಲ್ಲೂಕು ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್.ಸಿ. ಸಿ.ಆರ್.ಪಿ ಇ.ಸಿ.ಓ ಗಳು ಇದ್ದರೂ ಮೊಟ್ಟೆ ವಿತರಣೆಯ ವಿಷಯವನ್ನು ಪರಿಶೀಲಿಸಲು ಖಾಸಗಿಯವರಿಗೆ ವಹಿಸಿದ್ದು ಪ್ರತಿನಿತ್ಯ ಶಾಲೆಗೆ ಬಂದು ಶಿಕ್ಷಕರಿಗೆ ವಿನಾ ಕಾರಣ ತುಂಬಾ ತೊಂದರೆ ಕೊಡುತ್ತಿದ್ದಾರೆ. ಆದ್ದರಿಂದ ಮಧ್ಯಾಹ್ನದ ಊಟ, ಮೊಟ್ಟೆ ವಿತರಣೆ, ಹಾಲು ವಿತರಣೆ ಪಠ್ಯಪುಸ್ತಕ ಸಮವಸ್ತ್ರ ನೀಡುವುದು ಎಲ್ಲವನ್ನು ಬೇರೆ ಯಾವುದಾದರು ಸಂಸ್ಥೆಗೆ ನೀಡಿ ಶಿಕ್ಷಕರನ್ನು ಎಲ್ಲ ಜವಬ್ದಾರಿಗಳಿಂದ ಮುಕ್ತಗೊಳಿಸಿ ಶಾಲೆಯಲ್ಲಿ ಪಾಠ ಮಾಡಲು ಅವಕಾಶ ಮಾಡಿಕೊಡಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾದ ಮಧ್ಯಾಹ್ನ ಉಪಹಾರ ಯೋಜನೆಯಡಿ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಪೌಷ್ಠಿಕತೆ ಮತ್ತು ರಕ್ತ ಹೀನತೆ ನಿವಾರಿಸಲು ವಾರದಲ್ಲಿ 6 ದಿನ ಮಧ್ಯಾಹ್ನ ಬಿಸಿಯೂಟದೊಂದಿಗೆ ಪೂರಕ ಪೌಷ್ಠಿಕ ಆಹಾರವಾದ ಮೊಟ್ಟೆ/ಶೇಂಗಾ ಚಿಕ್ಕಿ/ಬಾಳೆಹಣ್ಣು ವಿತರಿಸಲಾಗುತ್ತಿದೆ.

ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಈ ಕಾರ್ಯಕ್ರಮವು ಮಕ್ಕಳ ಸಮಗ್ರ ದೈಹಿಕ ಆರೋಗ್ಯದ ಬೆಳವಣಿಗೆಗೆ ಪೂರಕವಾಗಿದೆ. ರಾಜ್ಯ ಸರ್ಕಾರದಿಂದ 2 ದಿನಗಳಿಗೆ ಸಂಬಂಧಿಸಿದ ಪೂರಕ ಪೌಷ್ಠಿಕ ಆಹಾರದ ವಿತರಣೆಯ ವೆಚ್ಚವನ್ನು ಭರಿಸಲಾಗುತ್ತಿದ್ದು, ಉಳಿದ 4 ದಿನಗಳ ವೆಚ್ಚವನ್ನು ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯಿಂದ ಭರಿಸಲಾಗುತ್ತಿದೆ.

ಪ್ರತಿ ವಿದ್ಯಾರ್ಥಿಗೆ ಪೂರಕ ಪೌಷ್ಠಿಕ ಆಹಾರ ವಿತರಣೆಗೆ ರೂ.6/-ಗಳ ಒಂದು ದಿನದ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಶಾಲೆಗಳಲ್ಲಿ ಬಿಸಿಯೂಟ ಸಿದ್ಧಪಡಿಸಲು ಹಾಗೂ ಪೂರಕ ಪೌಷ್ಠಿಕ ಆಹಾರ ವಿತರಿಸಲು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಡುಗೆ ಸಿಬ್ಬಂದಿಯವರನ್ನು ನೇಮಕ ಮಾಡಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಮೇಲುಸ್ತುವಾರಿಯನ್ನು ಮಾತ್ರ ಶಿಕ್ಷಕರು ನೋಡಿಕೊಳ್ಳುತ್ತಾರೆ.

ರಾಜ್ಯ ಸರ್ಕಾರದಿಂದ ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ಚಿಕ್ಕಿ/ಬಾಳೆಹಣ್ಣು ವಿತರಿಸಲು ಪ್ರತಿ ವಿದ್ಯಾರ್ಥಿಗೆ ಒಂದು ದಿನಕ್ಕೆ ರೂ.6/-ಗಳ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದ್ದು, ಈ ಘಟಕ ವೆಚ್ಚದಲ್ಲಿ ಮೊಟ್ಟೆ ಖರೀದಿಸಲು ರೂ.5/-ಗಳನ್ನು ನಿಗದಿಪಡಿಸಲಾಗಿದೆ. ಮೊಟ್ಟೆಯ ದರ ಮಾರುಕಟ್ಟೆಗಳಲ್ಲಿ ಏಕರೂಪವಾಗಿ ನಿಗದಿಯಾಗಿರುವುದಿಲ್ಲ. ಮೊಟ್ಟೆಯ ಲಭ್ಯತೆಯ ಆಧಾರದಲ್ಲಿ ಮೊಟ್ಟೆಯ ದರದಲ್ಲಿ ಏರಿಳಿಕೆಯಾಗುತ್ತದೆ.

ಈ ಹಿನ್ನೆಲೆಯಲ್ಲಿ, ಸರ್ಕಾರವು ನಿಗದಿ ಮಾಡಿರುವ ಮೊಟ್ಟೆಯ ದರವು ಸೂಕ್ತವಾಗಿರುವುದು ಕಂಡುಬಂದಿರುತ್ತದೆ. ಪೂರಕ ಪೌಷ್ಠಿಕ ಆಹಾರ ಖರೀದಿ ಪ್ರಕ್ರಿಯೆಯನ್ನು ಶಾಲಾ ಹಂತದಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು, ಶಾಲಾ ಮುಖ್ಯ ಶಿಕ್ಷಕರು ಹಾಗೂ ಇತರರನ್ನೊಳಗೊಂಡ ಖರೀದಿ ಸಮಿತಿಯಿಂದ ನಿರ್ವಹಿಸಲಾಗುತ್ತಿದೆ. ಮೊಟ್ಟೆಗಳನ್ನು ಸಗಟು ಬೆಲೆಯಲ್ಲಿ ಖರೀದಿಸುವುದರಿಂದ ಶಿಕ್ಷಕರಿಗೆ ಆರ್ಥಿಕ ಹೊರೆ ಉಂಟಾಗುವುದಿಲ್ಲ.

ಪೂರಕ ಪೌಷ್ಠಿಕ ಆಹಾರ ವಿತರಣೆಯ ಪ್ರಗತಿ ವಿವರಗಳನ್ನು SATS-MDM ಪೋರ್ಟಲ್ ನಲ್ಲಿ ಸಂಗ್ರಹಿಸಲಾಗುತ್ತಿದ್ದು, ಸದರಿ ಸಂಗ್ರಹಣಾ ಪ್ರಕ್ರಿಯೆಯು ತುಂಬಾ ಸರಳವಾಗಿದ್ದು, ಸದರಿ ಪ್ರಕ್ರಿಯೆಯ ಕುರಿತು ಮುಖ್ಯ ಶಿಕ್ಷಕರಿಗೆ ಈಗಾಗಲೇ ತರಬೇತಿಯನ್ನು ನೀಡಲಾಗಿದೆ.

ತಾಲ್ಲೂಕು ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ / ಸಮನ್ವಯಾಧಿಕಾರಿಗಳು, ಸಮೂಹ ಸಂಪನ್ಮೂಲ ವ್ಯಕ್ತಿಗಳಿಗೆ ಶಾಲೆಗಳಲ್ಲಿನ ಪೂರಕ ಆಹಾರ ವಿತರಣೆ ಮೇಲುಸ್ತುವಾರಿಯ ಜವಾಬ್ದಾರಿಯನ್ನು ನೀಡಲಾಗಿದ್ದು, ಖಾಸಗಿಯವರಿಗೆ ವಹಿಸಿರುವುದಿಲ್ಲ. ಅಜೀಂ ಪ್ರೇಮ್‌ಜಿ ಫೌಂಡೇಷನ್ ಸಂಸ್ಥೆಯ ವ್ಯಕ್ತಿಗಳು ಕೆಲವು ಶಾಲೆಗಳಿಗೆ ಮಾತ್ರ ಭೇಟಿ ನೀಡಿ ಪೂರಕ ಪೌಷ್ಠಿಕ ಆಹಾರ ವಿತರಣೆಯ ಕುರಿತು ಮೌಲ್ಯಮಾಪನ ನಡೆಸುತ್ತಿರುತ್ತಾರೆ. ಇದರಿಂದ ಶಿಕ್ಷಕರಿಗೆ ಯಾವುದೇ ತೊಂದರೆಯಾಗಿರುವುದಿಲ್ಲ.

ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳನ್ನು ಇಲಾಖಾ ವತಿಯಿಂದಲೇ ಖರೀದಿಸಿ ಶಾಲೆಗಳಿಗೆ ಸರಬರಾಜು ಮಾಡಲಾಗುತ್ತದೆ. ವಿದ್ಯಾರ್ಥಿಗಳಿಗೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳನ್ನು ವಿತರಣೆಯನ್ನು ಮಾತ್ರ ಶಾಲಾ ಹಂತದಲ್ಲಿ ಕೈಗೊಳ್ಳಲಾಗುತ್ತದೆ.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡಲಾಗುವ ಸೌಲಭ್ಯವನ್ನು ಒದಗಿಸುವುದು ಶಾಲೆಗಳ ಮುಖ್ಯ ಶಿಕ್ಷಕರ / ಶಿಕ್ಷಕರ ಜವಾಬ್ದಾರಿಯಾಗಿರುತ್ತದೆ. ಮುಖ್ಯ ಶಿಕ್ಷಕರು / ಶಿಕ್ಷಕರ ಈ ಜವಾಬ್ದಾರಿಯಿಂದ ಎಲ್ಲಾ ಶಾಲಾ ಮಕ್ಕಳಿಗೂ ಸರ್ಕಾರದ ಪ್ರೋತ್ಸಾಹಕ ಯೋಜನೆಗಳು ಸಮರ್ಪಕವಾಗಿ ತಲುಪಿ ಉಪಯೋಗವಾಗುತ್ತವೆ. ಅದರಂತೆ, ಮಧ್ಯಾಹ್ನದ ಬಿಸಿಯೂಟ ಮತ್ತು ಕ್ಷೀರಭಾಗ್ಯ ಕಾರ್ಯಕ್ರಮಗಳನ್ನು ಶಿಕ್ಷಕರ ಮೇಲುಸ್ತುವಾರಿಯಲ್ಲಿ ನಿರ್ವಹಿಸಿ, ಮುಂದುವರೆಸುವುದು ಸೂಕ್ತವಾಗಿರುತ್ತದೆ.

**ಇಪಿ 108 ಎಂಎಂಎಸ್ 2024**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**